**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ**

**ಸಿ.ಸಿ.ಸಂಖ್ಯೆ:821/2024**

ಪಿರ್ಯಾದಿ : ರಾಜ್ಯ, ಪರವಾಗಿ ಮೂಡಿಗೆರೆ ಪೊಲೀಸ್ ಠಾಣೆ,
ಮೂಡಿಗೆರೆ.

ವಿರುದ್ಧ

ಆರೋಪಿ : ರೇವಣಪ್ಪ, ವಯಸ್ಸು ಸುಮಾರು 54 ವರ್ಷ,
ಬಿನ್ ತಿಮ್ಮಣ್ಣ, ವಾಸಃ ಚನ್ನಗಿರಿ ರಸ್ತೆ,
ಸತ್ಯಸಾಯಿ ನಗರ, ಭದ್ರಾವತಿ,
ಶಿವಮೊಗ್ಗ ಜಿಲ್ಲೆ.

**ಆಪಾದನೆಯ ಸಾರಾಂಶ.**

ಶ್ರೀ. ವಿಶ್ವನಾಥ್ ಎ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ದಿನಾಂಕ 04.11.2023 ರಂದು ಸಂಜೆ 6.15 ರ ಸಮಯದಲ್ಲಿ ಮೂಡಿಗೆರೆ ಪೊಲೀಸ್ ಠಾಣಾ ವ್ಯಾಪ್ತಿಯ ಬಿದರಹಳ್ಳಿ ಗ್ರಾಮದ ಸಮೀಪವಿರುವ ಕೆ.ಎಸ್.ಆರ್.ಟಿ.ಸಿ ಬಸ್ ಡಿಪೋ ಮುಂದೆ ಹಾದು ಹೋಗಿರುವ ಎನ್.ಹೆಚ್-73 ನೇ ಠಾರು ರಸ್ತೆಯಲ್ಲಿ ಚಾಸಾ4-ಕೃಷ್ಣಮೂರ್ತಿ ರವರ ಮಗನಾದ 42 ವರ್ಷದ ವಿಶ್ವೇಂದ್ರ ರವರು ಅವರ ಬಾಬ್ತು ವಾಹನ ನೋಂದಣಿ ಸಂಖ್ಯೆಃ ಕೆಎ-18-ಇಜೆ-1753 ನೇ ಯಮಹಾ FZ-S ಮೋಟಾರ್ ಸೈಕಲ್ ನಲ್ಲಿ ಹಿಂದೆ ಚಾಸಾ1-ಲಕ್ಷ್ಮೀ ರವರನ್ನು ಕೂರಿಸಿಕೊಂಡು ಕೊಟ್ಟಿಗೆಹಾರ ಕಡೆಯಿಂದ ಮೂಡಿಗೆರೆ ಕಡೆಗೆ ರಸ್ತೆಯ ಎಡಭಾಗದಲ್ಲಿ ಚಾಲನೆ ಮಾಡಿಕೊಂಡು ಬರುತ್ತಿರುವಾಗ, ರಸ್ತೆಗೆ ದನ ಅಡ್ಡ ಬಂದಿದ್ದರಿಂದ ವಿಶ್ವೇಂದ್ರ ರವರು ಮೋಟಾರು ಸೈಕಲ್ ಅನ್ನು ಸ್ಲೋ ಮಾಡಿದಾಗ, ಮೋಟರ್ ಸೈಕಲ್ ಹಿಂದೆಯೇ ಕೊಟ್ಟಿಗೆಹಾರ ಕಡೆಯಿಂದ ಮೂಡಿಗೆರೆ ಕಡೆಗೆ ಆರೋಪಿಯಾದ ನೀವು ನಿಮ್ಮ ವಾಹನ ನೋಂದಣಿ ಸಂಖ್ಯೆಃ ಕೆಎ-66-0117 ನೇ ಗ್ಯಾಸ್ ಸಿಲಿಂಡರ್ ತುಂಬಿದ ಲಾರಿಯನ್ನು ನಿರ್ಲಕ್ಷ್ಯತನ ಮತ್ತು ಅಜಾಗರೂಕತೆಯಿಂದ ಚಲಾಯಿಸಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **279** ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

**2.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಸದರಿ ವಾಹನವನ್ನು ನಿರ್ಲಕ್ಷ್ಯತನ ಮತ್ತು ಅಜಾಗರೂಕತೆಯಿಂದ ಚಲಾಯಿಸಿಕೊಂಡು ಬಂದು ಮೋಟಾರ್ ಸೈಕಲ್ ನ ಹಿಂಬದಿಗೆ ಡಿಕ್ಕಿಪಡಿಸಿದ ಪರಿಣಾಮ, ಮೋಟಾರ್ ಸೈಕಲ್ ಸಮೇತ ವಿಶ್ವೇಂದ್ರ ಮತ್ತು ಚಾಸಾ1

ರವರು ರಸ್ತೆ ಮೇಲೆ ಬಿದ್ದಾಗ ಲಾರಿಯ ಚಕ್ರ ವಿಶ್ವೇಂದ್ರ ರವರ ದೇಹದ ಮೇಲೆ ಚಕ್ರ ಹರಿದ ಪರಿಣಾಮ ವಿಶ್ವೇಂದ್ರ ರವರು ತೀವ್ರ ರಕ್ತಗಾಯಗಳಿಂದ ಹಾಗೂ ರಕ್ತ ಸ್ರಾವದಿಂದ ಸ್ಥಳದಲ್ಲಿಯೇ ಮೃತಪಟ್ಟಿರುತ್ತಾರೆ. ಈ ರೀತ್ಯಾ ಆರೋಪಿತರಾದ ನೀವು ಭಾರತ ದಂಡ ಸಂಹಿತೆ ಕಲಂ **304(ಎ)** ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

**3.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಸದರಿ ವಾಹನವನ್ನು ನಿರ್ಲಕ್ಷ್ಯತನ ಮತ್ತು ಅಜಾಗರೂಕತೆಯಿಂದ ಚಲಾಯಿಸಿಕೊಂಡು ಬಂದು ಮೋಟಾರ್ ಸೈಕಲ್ ನ ಹಿಂಬದಿಗೆ ಡಿಕ್ಕಿಪಡಿಸಿದ ಪರಿಣಾಮ, ಚಾಸಾ1 ರವರ ಬಲ ಕಾಲಿನ ಮೇಲೆ ಲಾರಿಯ ಚಕ್ರ ಹರಿದು ಚಾಸಾ1 ರವರ ಬಲ ಕಾಲಿಗೆ ತೀವ್ರ ಸ್ವರೂಪದ ಮೂಳೆ ಮುರಿದು ರಕ್ತ ಗಾಯಗಳನ್ನುಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **338** ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

**4.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಸದರಿ ವಾಹನವನ್ನು ನಿರ್ಲಕ್ಷ್ಯತನ ಮತ್ತು ಅಜಾಗರೂಕತೆಯಿಂದ ಚಲಾಯಿಸಿಕೊಂಡು ಬಂದು ಮೋಟಾರ್ ಸೈಕಲ್ ನ ಹಿಂಬದಿಗೆ ಡಿಕ್ಕಿಪಡಿಸಿದ ಪರಿಣಾಮ, ಚಾಸಾ1 ರವರ ಬಲ ಕಾಲಿನ ಮೇಲೆ ಲಾರಿಯ ಚಕ್ರ ಹರಿದು ಚಾಸಾ1 ರವರ ಬಲ ಕಾಲಿಗೆ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **337** ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

(ಆರೋಪಿಗೆ ದಿನಾಂಕ 05.09.2024 ರಂದು ಆಪಾದನೆಯ ಸಾರಾಂಶವನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)

Sd/-

ಮೂಡಿಗೆರೆ
ದಿನಾಂಕಃ 05.09.2024.

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ.